ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಕೊಡಗು ಜಿಲ್ಲೆಯಲ್ಲಿ ಸತತ 2 ವರ್ಷ ಸಂಭವಿಸಿದ ಪ್ರಾಕೃತಿಕ ವಿಕೋಪದಿಂದಾಗಿ ಸಂಕಷ್ಟದಲ್ಲಿರುವ ರೈತರಿಗೆ ವಿಶೇಷ ನೆರವು ನೀಡುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು):-

1081 (1159) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ಸತತ 2 ವರ್ಷ ಸಂಭವಿಸಿದ ಪ್ರಾಕೃತಿಕ ವಿಕೋಪದಿಂದಾಗಿ ಸಂಕಷ್ಟದಲ್ಲಿರುವ ಸಹಕಾರಿ ರೈತರಿಗೆ ಇಲಾಖೆಯಿಂದ ದೊರೆತ್ತಿರುವ ವಿಶೇಷ ನೆರವು ಹಾಗೂ ಆರ್ಥಿಕ ಸೌಲಭ್ಯಗಳೇನು ;

(ಆ) ಪ್ರಾಕೃತಿಕ ವಿಕೋಪದಿಂದಾಗಿ ಜಿಲ್ಲೆಯಲ್ಲಿ ಆರ್ಥಿಕವಾಗಿ ಮುಗ್ಗಟ್ಟು ಎದುರಿಸುತ್ತಿರುವ ಸಹಕಾರಿ ಸಂಸ್ಥೆಗಳಿಗೆ ಪುನಶ್ಚೇತನಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಜಿಲ್ಲೆಯಲ್ಲಿನ ಸಹಕಾರ ಸಂಸ್ಥೆಗಳಿಗೆ ವಿಶೇಷ ಆರ್ಥಿಕ ನೆರವು ನೀಡಿ ಆ ಮೂಲಕ ರೈತ ಸಹಕಾರಿಗಳ ನೆರವಿಗೆ ಸರ್ಕಾರ ಮುಂದಾಗುವುದೇ?